**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

**ಸಂಖ್ಯೆ: ಸಿ4(9)/ವಾ.ಕ್ರಿ.ಯೋ/ಅನುಷ್ಠಾನ/01/2024-25** **ದಿನಾಂಕ: 06-10-2025**

**ಜ್ಞಾಪನ**

ವಿಷಯ:- ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಕರ್ನಾಟಕ ರಾಜ್ಯದ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷೆಯನ್ನು ಕೈಗೊಳ್ಳುತಿರುವ ಹಿನ್ನೆಲೆಯಲ್ಲಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಸಮಯ ಮರು ನಿಗದಿ ಮಾಡುವ ಕುರಿತು

ಉಲ್ಲೇಖ:-
1. ಈ ಕಛೇರಿ ಜ್ಞಾಪನ ಸಂಖ್ಯೆ:ಸಿ4(9)/ವಾ.ಕ್ರಿ.ಯೋ/ಅನುಷ್ಠಾನ/ 01/2024-25 ದಿನಾಂಕ:02.04.2025.
2. ಈ ಕಛೇರಿ ಜ್ಞಾಪನ ಸಂಖ್ಯೆ:ಸಿ4(9)/ವಾ.ಕ್ರಿ.ಯೋ/ಅನುಷ್ಠಾನ/ 01/2024-25 ದಿನಾಂಕ:21.06.2025.
3. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 289 ಬಿಸಿಎ 2025 ಬೆಂಗಳೂರು, ದಿನಾಂಕ: 13-08-2025.
4. ದಿನಾಂಕ: 26.09.2025ರಂದು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಮತ್ತು ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ಇವರ ಸಮ್ಮುಖದಲ್ಲಿ ಚರ್ಚಿಸಿದಂತೆ.
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕರಾಹಿಂವಆ /ಸಕೋ /ಸಿಆರ್ -36 /2025-26 ದಿ: 06-10-2025.

*********

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (3) ರ ಆದೇಶದಲ್ಲಿರುವಂತೆ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಕರ್ನಾಟಕ ರಾಜ್ಯದ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸಮೀಕ್ಷೆಯನ್ನು ಡಿಜಿಟಲ್ ವಿಧಾನದಲ್ಲಿ ಕೈಗೊಳ್ಳುವುದು ಮತ್ತು ಸಮೀಕ್ಷೆಯನ್ನು ಡಿಜಿಟಲ್ ವಿಧಾನದಲ್ಲಿ ಮಾಡಲು ತಂತ್ರಾಂಶದ ಅಭಿವೃದ್ಧಿ ಮತ್ತು ಉಸ್ತುವಾರಿಯನ್ನು ಕೈಗೊಳ್ಳುವುದು, ಹಿಂದುಳಿದ ವರ್ಗಗಳ ಆಯೋಗವು ನಡೆಸುವ ಸಮೀಕ್ಷೆಗೆ ಸಾರ್ವಜನಿಕವಾಗಿ ಲಭ್ಯವಿರುವ ಚುನಾವಣಾ ಮತದಾರರ ಪಟ್ಟಿಯನ್ನು ಉಪಯೋಗಿಸಿಕೊಂಡು ಸಮೀಕ್ಷಾ ಕಾರ್ಯವನ್ನು ಕೈಗೊಳ್ಳಲು ಅಧಿಕಾರಿಗಳನ್ನು ಹಾಗೂ ಶಿಕ್ಷಕರನ್ನು ಹಾಗೂ ಇತರೆ ಸಿಬ್ಬಂದಿಗಳು ಕೆಲಸ ನಿರ್ವಹಿಸುವಂತೆ ಆದೇಶಿಸಿದೆ. ಸದರಿ ಆದೇಶದಂತೆ ಸಮೀಕ್ಷೆಯನ್ನು ನಡೆಸಲಾಗುತ್ತಿದೆ.

ಸಮೀಕ್ಷೆಯನ್ನು ಗ್ರೇಟರ್ ಬೆಂಗಳೂರು ಆಥಾರಿಟಿ ವ್ಯಾಪ್ತಿಯಲ್ಲಿ ದಿನಾಂಕ: 04-10-2025 ರಿಂದ ಪ್ರಾರಂಭಿಸಲಾಗಿದ್ದು, ರಾಜ್ಯದ ಇತರೆ ಭಾಗಗಳಲ್ಲಿ ದಿನಾಂಕ: 22-09-2025 ರಿಂದ ಪ್ರಾರಂಭಿಸಲಾಗಿದೆ.

ಸಮೀಕ್ಷೆಯು ಪೂರ್ಣಗೊಳ್ಳಲು ಹೆಚ್ಚಿನ ಕಾಲಾವಕಾಶದ ಅಗತ್ಯವಿರುವುದನ್ನು ಮನಗೊಂಡು, ದಿನಾಂಕ: 26.09.2025 ರಂದು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿರುವಂತೆ ಸಮೀಕ್ಷೆಯು ರಜಾ ಅವಧಿಯ

ನಂತರವು ಮುಂದುವರೆಯುವ ಸಾಧ್ಯತೆ ಇರುವುದರಿಂದ ರಜಾ ಅವಧಿಯ ನಂತರ ಶಾಲೆ ನಡೆಯುವ ಸಮಯವನ್ನು ಪರಿಷ್ಕರಿಸಿ ಆದೇಶಿಸುವುದು ಸೂಕ್ತ ಎಂದು ತೀರ್ಮಾನಿಸಿ ಅದರಂತೆ ಕ್ರಮವಹಿಸಲು ನಿರ್ಧರಿಸಲಾಯಿತು.

ಉಲ್ಲೇಖ (5) ರ ಪತ್ರದಲ್ಲಿ ತಿಳಿಸಿರುವಂತೆ ಸಮೀಕ್ಷೆ ಪೂರ್ಣಗೊಳಿಸಲು ಇನ್ನೂ ಹೆಚ್ಚಿನ ಕಾಲಾವಕಾಶದ ಅಗತ್ಯವಿರುವುದಾಗಿ ತಿಳಿಸಿರುವ ಹಿನ್ನೆಲೆಯಲ್ಲಿ, ಶಾಲಾ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಮಧ್ಯವಾರ್ಷಿಕ ರಜಾ ದಿನಗಳ ನಂತರ ಶಾಲಾ ತರಗತಿಗಳು ಸಮೀಕ್ಷೆಯ ಕಾರಣದಿಂದ ಕುಂಠಿತವಾಗಬಾರದು ಎನ್ನುವ ದೃಷ್ಟಿಯಿಂದ ಈ ಕೆಳಗಿನ ಸೂಚನೆಗಳಂತೆ ಕ್ರಮವಹಿಸುವುದು.

- **ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ:** ಈ ವ್ಯಾಪ್ತಿಯಲ್ಲಿನ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ದಿ: 8-10-2025 ರಿಂದ 24-10-2025 ರವರೆಗೆ ಶಾಲಾ ತರಗತಿಗಳನ್ನು ಬೆಳಿಗ್ಗೆ 8.00 ಗಂಟೆಯಿಂದ ಅಪರಾಹ್ನ 1.00 ಗಂಟೆಯವರೆಗೆ ನಿರ್ವಹಿಸಿ, ನಂತರದ ಅವಧಿಯಲ್ಲಿ ಸಮೀಕ್ಷೆ ಕಾರ್ಯಕ್ಕೆ ನಿಯೋಜಿಸಿರುವ ಶಿಕ್ಷಕರು ಸಮೀಕ್ಷಾ ಕಾರ್ಯವನ್ನು ನಿರ್ವಹಿಸುವುದು. ಸಮೀಕ್ಷೆಯನ್ನು ಕೈಗೊಂಡು ದಿನಾಂಕ: 24-10-2025 ರ ಅಂತ್ಯದೊಳಗೆ ಪೂರ್ಣಗೊಳಿಸುವುದು.
- **ರಾಜ್ಯದ ಇತರೆ ಭಾಗಗಳಲ್ಲಿ** (ಗ್ರೇಟರ್ ಬೆಂಗಳೂರು ವ್ಯಾಪ್ತಿ ಹೊರತುಪಡಿಸಿ ಉಳಿದ ಭಾಗಗಳು): ಈ ವ್ಯಾಪ್ತಿಯಲ್ಲಿನ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ದಿ: 8-10-2025 ರಿಂದ 12-10-2025 ರವರೆಗೆ ಶಾಲಾ ತರಗತಿಗಳನ್ನು ಬೆಳಿಗ್ಗೆ 8.00 ಗಂಟೆಯಿಂದ ಅಪರಾಹ್ನ 1.00 ಗಂಟೆಯವರೆಗೆ ನಿರ್ವಹಿಸಿ, ನಂತರದ ಅವಧಿಯಲ್ಲಿ ಸಮೀಕ್ಷೆ ಕಾರ್ಯಕ್ಕೆ ನಿಯೋಜಿಸಿರುವ ಶಿಕ್ಷಕರು ಸಮೀಕ್ಷಾ ಕಾರ್ಯವನ್ನು ನಿರ್ವಹಿಸುವುದು. ಸಮೀಕ್ಷೆಯನ್ನು ರಜಾ ದಿನಗಳಲ್ಲಿಯೂ ಕೈಗೊಂಡು ದಿನಾಂಕ: 12-10-2025 ರ ಅಂತ್ಯದೊಳಗೆ ಪೂರ್ಣಗೊಳಿಸುವುದು.

ಈ ಎಲ್ಲ ಅಂಶಗಳಂತೆ ರಾಜ್ಯದ ಸರ್ಕಾರಿ ಹಾಗೂ ಸರ್ಕಾರಿ ಅನುದಾನಿತ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳು ಕಾರ್ಯನಿರ್ವಹಿಸುವುದು.

**ವಿಶೇಷ ಸೂಚನೆ:- ಕಾಲಕಾಲಕ್ಕೆ ಸರ್ಕಾರದಿಂದ ನೀಡುವ ಸೂಚನೆಗಳನ್ನು ಮತ್ತು ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ತಿಳಿಸಿದೆ.**

**ಸುರಲ್ಕರ್ ವಿಕಾಸ ಕಿಶೋರ್., ಭಾ.ಆ.ಸೇ.**
**ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ**
**ಬೆಂಗಳೂರು**

**ರವರಿಗೆ:-**

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು (ಅಭಿವೃದ್ಧಿ) ಶಾಲಾ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ.
2. ಪ್ರಾಂಶುಪಾಲರು, ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆ ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ರಾಜ್ಯ ಪಠ್ಯಕ್ರಮದ ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಮುಖ್ಯಸ್ಥರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ ಅಗತ್ಯ ಕ್ರಮಕ್ಕಾಗಿ

**ಪ್ರತಿಯನ್ನು ಮಾಹಿತಿಗಾಗಿ:-**

1. ಮಾನ್ಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.

2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು.
3. ರಾಜ್ಯ ಯೋಜನಾ ನಿರ್ದೇಶಕರು ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರು.
4. ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ 6ನೇ ಕ್ರಾಸ್ ಮಲ್ಲೇಶ್ವರಂ ಬೆಂಗಳೂರು.
5. ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ ಮಲ್ಲೇಶ್ವರಂ ಬೆಂಗಳೂರು.
6. ನಿರ್ದೇಶಕರು, ಪ್ರಧಾನ ಮಂತ್ರಿ ಪೋಷಣ್ ಶಕ್ತಿ ಅಭಿಯಾನ (ಮಧ್ಯಾಹ್ನ ಉಪಹಾರ ಯೋಜನೆ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
7. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಕಂದಾಯ ಇಲಾಖೆ, ರವರುಗಳಿಗೆ.
8. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಪಂಚಾಯತ್ ರಾಜ್ ಇಲಾಖೆ, ರವರುಗಳಿಗೆ.
9. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ವಿಭಾಗ /ಕಲಬುರಗಿ ವಿಭಾಗ.
10. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ., ಹೊಸಕೆರೆ ಹಳ್ಳಿ, ಬನಶಂಕರಿ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸಂಘ, ಬೆಂಗಳೂರು.
12. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಮತ್ತು ಜಿಲ್ಲಾ ನೋಡಲ್ ಅಧಿಕಾರಿಗಳಿಗೆ.
13. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಸಹ ನಿರ್ದೇಶಕರುಗಳಿಗೆ.
14. ಸಹ ನಿರ್ದೇಶಕರು(ಶಾಲಾ ಶಿಕ್ಷಣ),ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
15. ಹಿರಿಯ ಸಹಾಯಕ ನಿರ್ದೇಶಕರು(ಇ-ಆಡಳಿತ) ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್ ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಿದೆ.
16. ಕಛೇರಿ ಪ್ರತಿ.